**ಕರ್ನಾಟಕ ಸರ್ಕಾರ**

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು-560001**

DPI-CPI0ADM2(CSS)/7/2025/**E- 1803004** **ದಿನಾಂಕ :** 30/05/2026

# ಸುತ್ತೋಲೆ

**ವಿಷಯ** : ಸರ್ಕಾರಿ ಶಾಲೆಯಲ್ಲಿ ಚಲನಚಿತ್ರ ಚಿತ್ರೀಕರಿಸಲು ಅನುಮತಿಸದಿರುವ ಕುರಿತು.

**ಉಲ್ಲೇಖ** : ಈ ಕಛೇರಿ ಸುತ್ತೋಲೆ ಸಂಖ್ಯೆ : ಸಿ4(3) (2) : ಆಶಾ : 01:2010-11 ದಿನಾಂಕ : 07-02-2013

***

ವಿಷಯಕ್ಕೆ ಸಂಬಂಧಿಸಿದಂತೆ, ಚಲನಚಿತ್ರ, ಕಿರುಚಿತ್ರ, ಸಾಕ್ಷ್ಯಚಿತ್ರ ಚಿತ್ರೀಕರಣ ಹಾಗೂ ದೂರದರ್ಶನದಲ್ಲಿ ಪ್ರಸಾರವಾಗುವ ಧಾರಾವಾಹಿಗಳಿಗಾಗಿ ಸರ್ಕಾರಿ ಶಾಲೆಯ ಒಳಗೆ ಮತ್ತು ಶಾಲಾ ಆವರಣದಲ್ಲಿ ಚಿತ್ರೀಕರಣ ನಡೆಸಲು ಅನುಮತಿ ಕೋರಿ, ನಿರ್ಮಾಪಕರು/ನಿರ್ದೇಶಕರು ಈ ಕಛೇರಿಗೆ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿರುವ ಹಿನ್ನೆಲೆಯಲ್ಲಿ ಮುಖ್ಯವಾಗಿ ವಿದ್ಯಾರ್ಥಿಗಳ ಸುರಕ್ಷತೆ, ಕಲಿಕಾ ಪರಿಸರಕ್ಕೆ ತೊಂದರೆ ಉಂಟುಮಾಡುವ ಅಥವಾ ಶಾಲಾ ಚಟುವಟಿಕೆಗಳಿಗೆ ಅಡ್ಡಿಪಡಿಸುವ ಕಲಿಕಾ ಪರಿಸರಕ್ಕೆ ಆಗಬಹುದಾದ ಅಡೆತಡೆಗಳು ಮತ್ತು ಭದ್ರತಾ ಅಪಾಯಗಳನ್ನು ಪರಿಗಣಿಸಿ ಶಾಲೆಗಳಲ್ಲಿ ಚಿತ್ರೀಕರಣಕ್ಕೆ ಅನುಮತಿಯನ್ನು ನೀಡುವುದನ್ನು ನಿರಾಕರಿಸಿದೆ.

ಮುಂದುವರೆದು ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ವಾರ್ಷಿಕ ಶೈಕ್ಷಣಿಕ ಕ್ರಿಯಾ ಯೋಜನೆಯ ವೇಳಾಪಟ್ಟಿಯನ್ನು ಆಯಾ ಶೈಕ್ಷಣಿಕ ಸಾಲಿನಲ್ಲಿ ಏಕರೂಪದ ಶೈಕ್ಷಣಿಕ ಚಟುವಟಿಕೆಗಳನ್ನು ಜಾರಿಗೊಳಿಸಲು ಅನುವಾಗುವಂತೆ ಶೈಕ್ಷಣಿಕ ಅವಧಿಗಳು, ರಜಾ ದಿನಗಳು, ಮತ್ತು ವಾರ್ಷಿಕ ಕಾರ್ಯಸೂಚಿಯನ್ನು ನಿಗಧಿಪಡಿಸಿ ರಾಜ್ಯ ಪಠ್ಯಕ್ರಮದ ಎಲ್ಲಾ ಶಾಲೆಗಳಲ್ಲಿ ಅನುಷ್ಠಾನಗೊಳಿಸಿ ಅನುಪಾಲನೆ ಮಾಡಲು ತಿಳಿಸಲಾಗುತ್ತಿದೆ. ಇದರಲ್ಲಿ ಶೈಕ್ಷಣೇತರ ಚಟುವಟಿಕೆಗಳಿಗೆ ಆಸ್ಪದವನ್ನಾಗಲಿ ಅಥವಾ ಸಮಯವನ್ನಾಗಲಿ ನೀಡಿರುವುದಿಲ್ಲ. ಮುಂದುವರೆದು,

1. **ವಿದ್ಯಾರ್ಥಿಗಳ ಗೌಪ್ಯತೆ ಮತ್ತು ಸುರಕ್ಷತೆ**: ಶಾಲೆಯಲ್ಲಿನ ವಿದ್ಯಾರ್ಥಿಗಳ ಗೌಪ್ಯತೆ ಮತ್ತು ಸುರಕ್ಷತೆಯು ಆಯಾ ಶಾಲೆಯ ಮುಖ್ಯಸ್ಥರ ಹೊಣೆಯಾಗಿದ್ದು,ಇದನ್ನು ಕಾಪಾಡಲು

2. **ಶೈಕ್ಷಣಿಕ ಕಾರ್ಯಕ್ರಮಗಳಲ್ಲಿ ಅಡಚಣೆ**: ಚಿತ್ರೀಕರಣವು ಶೈಕ್ಷಣಿಕ ಕಾರ್ಯಕ್ರಮಗಳಿಗೆ ಅಡಚಣೆಯಾಗಬಹುದು ಮತ್ತು ವಿದ್ಯಾರ್ಥಿಗಳ ಕಲಿಕೆಯ ಮೇಲೆ ಪರಿಣಾಮ ಬೀರಬಹುದಾದ್ದರಿಂದ

3. **ಶಾಲೆಯ ನಿಯಮಗಳು ಮತ್ತು ನೀತಿಗಳು**: ಶಾಲೆಯ ನೀತಿ ಮತ್ತು ನಿಯಯಮಗಳನ್ವಯ

4. **ಪೋಷಕರ ಒಪ್ಪಿಗೆ**: ಕೆಲವು ಪೋಷಕರು ತಮ್ಮ ಮಕ್ಕಳ ಚಿತ್ರಗಳನ್ನು ಮಾಧ್ಯಮದಲ್ಲಿ ಪ್ರಕಟಿಸಲು ಒಪ್ಪಿಗೆ ನೀಡದಿರುವುದು.

5. **ಸುರಕ್ಷತಾ ಕಾರಣಗಳು**: ಶಾಲೆಯ ಭದ್ರತಾ ಕ್ರಮಗಳನ್ನು ಕಾಪಾಡಲು ಮತ್ತು ಸುರಕ್ಷತಾ ಕಾರಣಗಳಿಗಾಗಿ

6. **ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ**: ಚಿತ್ರೀಕರಣವು ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಮೇಲೆ ಕೂಡ ಪರಿಣಾಮ ಬೀರಬಹುದು ಮತ್ತು ಒತ್ತಡವನ್ನು ಉಂಟುಮಾಡಬಹುದು.

ಈ ಎಲ್ಲಾ ಮೇಲ್ಕಂಡ ಅಂಶಗಳ ಜೊತೆಗೆ ಉಲ್ಲೇಖ-1ರ ಈ ಕಛೇರಿ ಸುತ್ತೋಲೆಯನ್ವಯ ಖಾಸಗಿ/ಶೈಕ್ಷಣೇತರ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಶಾಲಾ ಮೈದಾನ/ಆವರಣವನ್ನು ಬಳಸಲು ಅನುಮತಿ ನಿರಾಕರಿಸಿರುವ ಹಿನ್ನೆಲೆಯಲ್ಲಿ ಸರ್ಕಾರಿ ಶಾಲೆಯ ಒಳಗೆ ಅಥವಾ ಶಾಲಾ ಆವರಣದಲ್ಲಿ ಚಿತ್ರೀಕರಣ ನಡೆಸಲು ಅನುಮತಿಯನ್ನು ನಿರಾಕರಿಸಿದೆ.

Digitally signed by
VIKAS KISHOR SURALKAR
Date: 01-06-2026
17:40:38

ಆಯುಕ್ತರು,
ಶಾಲಾ ಶಿಕ್ಷಣ ಇಲಾಖೆ

ಗೆ

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ,
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ (ಉಪನಿರ್ದೇಶಕರು(ಆಡಳಿತ) ರವರ ಮೂಲಕ)

ಪ್ರತಿಯನ್ನು ಗೌರವಪೂರ್ವಕವಾಗಿ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.